ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಶ್ರೀಮತಿ ಎಸ್.ಶಶಿಕಲಾ ಮತ್ತು ಶ್ರೀಮತಿ ಹೆಚ್.ಎಂ. ಪ್ರಭಾ, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು ಹೆಚ್ಚುವರಿಯಾಗಿದ್ದು, ಅವರುಗಳನ್ನು ಕಾರ್ಯಭಾರವಿರುವ ಇತರೆ ಕಾಲೇಜುಗಳಿಗೆ ನಿಯೋಜನೆ ಮಾಡಲಾಗಿದೆ. ಶ್ರೀ ಎಸ್.ಬಿ. ಪ್ರಸಾದ್, ಅರ್ಥಶಾಸ್ತ್ರ ಉಪನ್ಯಾಸಕರು ಹಾಗೂ ಶ್ರೀ ಹೆಚ್.ಆರ್. ಶೇಖರ್, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು, ಇವರುಗಳನ್ನು ದೂರಿನ ಮೇಲೆ ಬೇರೆ ಕಾಲೇಜುಗಳಿಗೆ ನಿಯೋಜನೆ ಮಾಡಲಾಗಿದೆ. ಸದರಿ ನಿಯೋಜನೆಯಿಂದ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

ಇ) ವಿದ್ಯಾರ್ಥಿಗಳಿಗೆ ಆಗುವ ತೊಂದರೆಯನ್ನು ತಪ್ಪಿಸಲು ಕಾರ್ಯಭಾರ ಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಿಸಿಕೊಳ್ಳಲಾಗುವುದು.

ಜಮಖಂಡಿ ಆಸ್ಪತ್ರೆಗೆ ವೈದ್ಯರುಗಳ ನೇಮಕ

238 (178) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಜಮಖಂಡಿ ನಗರದಲ್ಲಿರುವ 100 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯಲ್ಲಿರುವ ವೈದ್ಯರ ಹುದ್ದೆಗಳೆಷ್ಟು ;

ಆ) ಖಾಲಿ ಇರುವ ಹುದ್ದೆಗಳೆಷ್ಟು ;

ಇ) ಮುಖ್ಯ ವೈದ್ಯಾಧಿಕಾರಿಗಳ ಹುದ್ದೆ ಎಷ್ಟು ವರ್ಷದಿಂದ ತೆರವಿದೆ ;

ಈ) ಈ ಕೊರತೆಗಳನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳಾವುವು?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಮತ್ತು ಆ) ಜಮಖಂಡಿ ತಾಲ್ಲೂಕು ಆಸ್ಪತ್ರೆಯಲ್ಲಿ 8 ತಜ್ಞ ವೈದ್ಯರು, 1 ಮುಖ್ಯ ವೈದ್ಯಾಧಿಕಾರಿ, 1 ಹಿರಿಯ ವೈದ್ಯಾಧಿಕಾರಿ ಹಾಗೂ 1 ದಂತ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿವೆ. ಆ ಪೈಕಿ 5 ಹುದ್ದೆಗಳು ಭರ್ತಿಯಾಗಿದ್ದು, 6 ಹುದ್ದೆಗಳು ಖಾಲಿ ಇವೆ.

ಇ) ಒಂದು ಮುಖ್ಯ ವೈದ್ಯಾಧಿಕಾರಿ ಹುದ್ದೆಯು 2007 ರಿಂದ ಖಾಲಿ ಇರುತ್ತದೆ.

ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು :

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 70,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 50,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ರೂ. 65,000 ಹಾಗೂ ರೂ. 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಡುವ ಎಲ್ಲಾ ತಜ್ಞವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 5000 ದಿಂದ ರೂ. 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್. ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 125 ಹಾಗು

ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 49 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 2390 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. (ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರು ಸೇರಿದಂತೆ) ಹಾಗು 196 ಹುದ್ದೆಗಳು ಖಾಲಿಯಿವೆ. ದಿನಾಂಕ : 27-06-2012 ರಂದು ಒಟ್ಟು 155 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ.

ಮಂಡ್ಯ ನಗರದ ಪೊಲೀಸ್ ಕಾಲೋನಿಯಲ್ಲಿರುವ ಪದವಿ ಪೂರ್ವ ಕಾಲೇಜು

303 (372) ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಮಂಡ್ಯ ನಗರದ ಪೊಲೀಸ್ ಕಾಲೋನಿಯಲ್ಲಿರುವ ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದೇ ಪ್ರೌಢ ಶಾಲಾ ಕಟ್ಟಡದಲ್ಲಿ ತರಗತಿಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಪದವಿ ಪೂರ್ವ ಕಾಲೇಜಿಗೆ ಪ್ರಯೋಗ ಶಾಲೆ ಮತ್ತು ಪೀಠೋಪಕರಣಗಳ ಕೊರತೆಯಿದ್ದು, ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;